

ನೀರಾವರಿ ಸೌಲಭ್ಯ ಒದಗಿಸಲಾಗಿದೆ. 35,000 ಹೆಕ್ಟೇರ್ ಪ್ರದೇಶಕ್ಕೆ ಹೊಲಗಾಲುವೆ ನಿರ್ಮಾಣ, 28,000 ಹೆಕ್ಟೇರ್ ಪ್ರದೇಶಕ್ಕೆ ಬಸಿಗಾಲುವೆ ನಿರ್ಮಾಣ ಮತ್ತು 12,500 ಹೆಕ್ಟೇರ್ ಪ್ರದೇಶದ ಸವಳು– ಜವಳು ಭೂಮಿ ಅಭಿವೃದ್ಧಿಪಡಿಸಲಾಗಿದೆ.

ನೀರಾವರಿ ಸೌಲಭ್ಯ ಕಲ್ಪಿಸಿಕೊಡಬೇಕೆನ್ನುವ ಕನಸಿನ ಫಲವಾಗಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ– 3ರ ಅಡಿಯ ಉಪ ಯೋಜನೆಯಲ್ಲಿನ 5 ಮುಖ್ಯ ಸ್ಥಾವರ ಹಾಗೂ 437 ಕಿ.ಮೀ. ಮುಖ್ಯ/ ಶಾಖಾ ಕಾಲುವೆ ನಿರ್ಮಾಣ ಕಾಮಗಾರಿಯನ್ನು 5,076 ಕೋಟಿ ರೂಪಾಯಿ ವೆಚ್ಚದಲ್ಲಿ ಪೂರ್ಣಗೊಳಿಸಿದೆ. ರಾಮಥಾಳ ಹಂತ–2 ಯೋಜನೆಯಡಿ ಸುಮಾರು 24,000 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಕಲ್ಪಿಸುವ ಯೋಜನೆ ಶೀಘ್ರವೇ ಲೋಕಾರ್ಪಣೆಗೊಳ್ಳುತ್ತಿದೆ. ಎತ್ತಿನಹೊಳೆ ಯೋಜನೆಯ ಏತ ನೀರಾವರಿ ಕಾಮಗಾರಿ ಪ್ರಗತಿಯಲ್ಲಿದ್ದು, 34 ಕಿ.ಮೀ. ಉದ್ದದ ರೈಸಿಂಗ್ ಮೈನ್ ಪೂರ್ಣಗೊಂಡಿದೆ. ಕಾವೇರಿ ಕೊಳ್ಳದ ಅಣೆಕಟ್ಟುಗಳ 23 ನಾಲೆಗಳನ್ನು 1,588 ಕೋಟಿ ರೂ.ಗಳ ವೆಚ್ಚದಲ್ಲಿ ಆಧುನೀಕರಣಗೊಳಿಸುತ್ತಿದ್ದು. ಈ ಪೈಕಿ 13 ಕಾಮಗಾರಿಗಳು ಪೂರ್ಣಗೊಂಡಿದ್ದರೆ, ಇನ್ನುಳಿದ 10 ಕಾಮಗಾರಿಗಳು ವಿವಿಧ ಹಂತದಲ್ಲಿವೆ.

2017–18ನೇ ಸಾಲಿನಲ್ಲಿ 6,000 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ನಾರಾಯಣಪುರ ಎಡದಂಡೆ ಕಾಲುವೆ ಜಾಲದ ಆಧುನೀಕರಣ ಯೋಜನೆಯಡಿ ಸ್ಕಾಡಾ ಆಧಾರಿತ ಸ್ವಯಂಚಾಲಿತ ವ್ಯವಸ್ಥೆ ಅನುಷ್ಠಾನಕ್ಕೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಎತ್ತಿನ ಹೊಳೆ ಯೋಜನೆಯಡಿ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿ ನೀರನ್ನು ಎತ್ತಲು ಕ್ರಮ ಕೈಗೊಳ್ಳಲಾಗುವುದು. ಬೈರಗೊಂಡ್ಲು ಜಲಾಶಯ ನಿರ್ಮಾಣ ಹಾಗೂ ಕಾಲುವೆ ಕಾಮಗಾರಿಗಳನ್ನು ಪ್ರಾರಂಭಿಸಲಾಗುತ್ತಿದೆ.

2017–18ನೇ ಸಾಲಿನಲ್ಲಿ ಅಂದಾಜು 3,000 ಕೋಟಿ ರೂ. ವೆಚ್ಚದಲ್ಲಿ 25ಕ್ಕೂ ಹೆಚ್ಚು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಪೈಕಿ ವಿಜಯಪುರ, ಬಾಗಲಕೋಟೆ, ಕಲಬುರಗಿ, ಬೆಳಗಾವಿ, ಹಾಸನ, ಚಾಮರಾಜನಗರ ಜಿಲ್ಲೆಗಳ ವಿವಿಧ ಗ್ರಾಮಗಳಿಗೆ ನೀರು ಒದಗಿಸುವ ಯೋಜನೆಯೂ ಸೇರಿದೆ.

## ಸಣ್ಣ ನೀರಾವರಿಯಲ್ಲಿ ದಾಖಲೆ

ಸಣ್ಣ ನೀರಾವರಿ ಮೂಲಕ ಕಳೆದ ನಾಲ್ಕು ವರ್ಷಗಳಲ್ಲಿ 1.14 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಹೊಸದಾಗಿ ನೀರಾವರಿ ಸೌಲಭ್ಯವನ್ನು ಸೃಜಿಸಲಾಗಿದೆ. ಕೃಷಿಗೆ ನೇರವಾಗಿ ಸಂಬಂಧಿಸಿದ ಕೆರೆ ನೀರಾವರಿ ಯೋಜನೆಗಳ ಜೀರ್ಣೋದ್ಧಾರ ಮತ್ತು ಪಾರಂಪರಿಕ ಜಲಕಾಯಗಳ ಪುನರುಜ್ಜೀವನ ಕಾರ್ಯವನ್ನು ಅನುಷ್ಠಾನಗೊಳಿಸಿದೆ. 'ಕೆರೆಗಳ ಅಭಿವೃದ್ಧಿ ನಾಡಿನ ಶ್ರೇಯೋಭಿವೃದ್ಧಿ' ಯೋಜನೆಯಡಿ 193 ಕೆರೆಗಳನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಲಾಗಿದೆ.

'ಸೂರ್ಯಜ್ಯೋತಿ ರೈತರ ಬಾಳಿನ ಪರಂಜ್ಯೋತಿ' ಯೋಜನೆಯಡಿ ಆಯ್ದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ 14,436 ಫಲಾನುಭವಿಗಳಿಗೆ ಕೊಳವೆ ಬಾವಿ ಕೊರೆಯಿಸಿ ಅವುಗಳಿಗೆ ಸೌರಶಕ್ತಿ ಚಾಲಿತ ಪಂಪುಗಳನ್ನು ಅಳವಡಿಸಿಕೊಟ್ಟಿದೆ.

'ರಾಜ್ಯದಲ್ಲಿರುವ ಸುಮಾರು 30 ಸಾವಿರ ಕೆರೆಗಳ ಕ್ರಮಬದ್ಧ ಅಭಿವೃದ್ಧಿಗಾಗಿ 'ಕೆರೆ ಅಭಿವೃದ್ಧಿ ಪ್ರಾಧಿಕಾರ'ವನ್ನು ರಚಿಸಿದೆ. 100 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಕೆರೆಗಳ ಒತ್ತುವರಿ ತೆರವು ಮತ್ತು ಕೆರೆಗಳ ಪೋಷಕ ಕಾಲುವೆ/ ರಾಜ ಕಾಲುವೆಗಳ ದುರಸ್ತಿ ಕಾರ್ಯವನ್ನು ಕೈಗೊಂಡಿದೆ. ಅಂತರ್ಜಲ ನಿರ್ದೇಶನಾಲಯವನ್ನು ಪ್ರತ್ಯೇಕವಾಗಿ ಸ್ಥಾಪಿಸಿ, ಅಂತರ್ಜಲ ನಿಯಂತ್ರಣ ಹಾಗೂ ಅಭಿವೃದ್ಧಿಗೆ ವಿಶೇಷ ಒತ್ತು ನೀಡಿದೆ. ಅಂತರ್ಜಲ ಕುಸಿದಿರುವ ಜಿಲ್ಲೆಗಳಾದ ಗದಗ, ಬಿಜಾಪುರ, ಕೊಪ್ಪಳ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ನೈಸರ್ಗಿಕ ನದಿ– ಕೊಳ್ಳಗಳಿಗೆ ಅಡ್ಡಲಾಗಿ ಸರಣಿ 'ಪಿಕಪ್'ಗಳ ನಿರ್ಮಾಣ ಮಾಡುತ್ತಿದೆ. ಅಂತರ್ಜಲ ವೃದ್ಧಿಗಾಗಿ ಹಳ್ಳಗಳಿಗೆ ಚೆಕ್ ಡ್ಯಾಂ/ ಬ್ಯಾರೇಜ್‌ಗಳ ಕಾಮಗಾರಿಗಳನ್ನು 10 ಜಿಲ್ಲೆಗಳಲ್ಲಿ 200 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನಗೊಳಿಸಿದೆ.

ರಾಜ್ಯದಲ್ಲಿ ಸತತವಾಗಿ ಮರುಕಳಿಸುತ್ತಿರುವ ಬರಗಾಲ ಪರಿಸ್ಥಿತಿಯಲ್ಲಿ ನೀರಿನ ಕೊರತೆ ನೀಗಿಸಿ ಅಂತರ್ಜಲ ಹೆಚ್ಚಳಕ್ಕಾಗಿ ಕೆರೆಗಳ ಹೂಳೆತ್ತುವ 'ಕೆರೆ ಸಂಜೀವಿನಿ' ಯೋಜನೆಯನ್ನು ಕೆರೆ ಅಭಿವೃದ್ಧಿ ಪ್ರಾಧಿಕಾರದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಒಟ್ಟಾರೆ 100 ಕೋಟಿ ರೂ. ವೆಚ್ಚದಲ್ಲಿ ಹೂಳೆತ್ತಲು ಕ್ರಮ ಕೈಗೊಳ್ಳಲಾಗಿದೆ. ಕರಾವಳಿ ಜಿಲ್ಲೆಗಳಲ್ಲಿ 'ಪಶ್ಚಿಮ ವಾಹಿನಿ' ಯೋಜನೆಯಡಿ 100 ಕೋಟಿ ರೂ. ವೆಚ್ಚದಲ್ಲಿ ಕಿಂಡಿ ಅಣೆಕಟ್ಟುಗಳ ನಿರ್ಮಾಣ ಮಾಡಲಾಗುತ್ತಿದೆ. ಬೀದರ್, ಹಾವೇರಿ, ಚಾಮರಾಜನಗರ, ಚಿಕ್ಕಮಗಳೂರು ಮತ್ತು ಹಾಸನಗಳಲ್ಲಿ 50 ಕೋಟಿ ರೂ. ವೆಚ್ಚದಲ್ಲಿ ಚೆಕ್‌ಡ್ಯಾಂ ನಿರ್ಮಾಣ ಮಾಡಲಾಗುತ್ತಿದೆ.

ರಾಜ್ಯದಲ್ಲಿ 1.67 ಲಕ್ಷಕ್ಕೂ ಹೆಚ್ಚು ಕೃಷಿ ಹೊಂಡಗಳ ಹಾಗೂ ಸುಮಾರು 2500 ಪಾಲಿ ಹೌಸ್‌ಗಳ ನಿರ್ಮಾಣ; 78 ಲಕ್ಷ ರೈತರಿಗೆ ಮಣ್ಣು ಆರೋಗ್ಯ ಕಾರ್ಡ್ ವಿತರಣೆ; ಹನಿ ನೀರಾವರಿಗೆ ಎಲ್ಲಾ ವರ್ಗದ ರೈತರಿಗೂ ಶೇಕಡಾ 90ರಷ್ಟು ಸಹಾಯಧನ; ಸುಮಾರು 13 ಲಕ್ಷ ರೈತರಿಗೆ ಕೃಷಿ ಯಂತ್ರ

